ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಪಟ್ಟಿ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಕೆರೆಯಿಂದ ಸರಬರಾಜು ಮಾಡುವ ನೀರಿನ ಗುಣಮಟ್ಟದ ಬಗ್ಗೆ

ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

71 (563) ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಮಂಡ್ಯಜಿಲ್ಲೆ ನಾಗಮಂಗಲ ಪುರಸಭೆ ವ್ಯಾಪ್ತಿಗೆ ದಿನನಿತ್ಯ ಪಟ್ಟಣದ ಪಕ್ಕದ ಕೆರೆಯಿಂದ ಸರಬರಾಜು ಮಾಡುವ ನೀರಿನ ಗುಣಮಟ್ಟ ಕಳಪೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕೆರೆಯಿಂದ ಸರಬರಾಜು ಮಾಡುವ ನೀರನ್ನು ಸಂಸ್ಕರಿಸಲು ಸರ್ಕಾರ/ಇಲಾಖೆ ತೆಗೆದುಕೊಂಡ ಕ್ರಮಗಳೇನು ;

(ಇ) ಈ ಸ್ಥಳದಲ್ಲಿ ಈಗಾಗಲೇ ನೀರಿನ ಸಂಸ್ಕರಣಾ ಘಟಕ ಸ್ಥಾಪಿಸಲಾಗಿದೆಯೇ; ಹಾಗಿದ್ದಲ್ಲಿ, ಈ ಘಟಕಕ್ಕೆ ಈವರೆಗೆ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು ; ಪ್ರಸ್ತುತ ಘಟಕ ಕಾರ್ಯನಿರ್ವಹಿಸುತ್ತಿರುವುದೆ ; ಕಾರ್ಯನಿರ್ವಹಿಸದಿದ್ದಲ್ಲಿ ಕಾರಣವೇನು ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಸಂಸ್ಕರಣೆ ಮಾಡದ ನೀರನ್ನು ಪುರಸಭೆ ವ್ಯಾಪ್ತಿಯ ಸಾರ್ವಜನಿಕರು ಬಳಸುವುದರಿಂದ ಈವರೆಗೆ ದಾಖಲಾದ ಆರೋಗ್ಯ ಸಮಸ್ಯೆಗಳೇನು ; (ವಿವರವಾದ ಮಾಹಿತಿ ನೀಡುವುದು) ಅನಾರೋಗ್ಯಕ್ಕೆ ಒಳಗಾದ ಸಾರ್ವಜನಿಕರಿಗೆ ಸರ್ಕಾರ ಯಾವ್ಯಾವ ಕ್ರಮಗಳನ್ನು ಹಮ್ಮಿಕೊಂಡಿದೆ ? (ಸಂಪೂರ್ಣವಾದ ದಾಖಲೆಗಳೊಂದಿಗೆ ವಿವರ ನೀಡುವುದು)